# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕಿನ ಕಾರಟಗಿ ಮತ್ತು ಇತರೆ 27 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂ:ಗ್ರಾಅಪ/24/ಗ್ರಾನೀಸ(2)2007 ದಿನಾಂಕ:31.05.2007.
2. ದಿನಾಂಕ:28.02.2022ರಂದು ನಡೆದ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ Variation & EOT ಪ್ರಾಧಿಕಾರ ಸಭೆಯ ನಡವಳಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರುರವರ ಕಡತ ಸಂಖ್ಯೆ:ಗ್ರಾಕುನೀ&ನೈಇ/ಟೆಕ್ನೋ/40/2022.

---

**ಪೀಠಿಕೆ:**

ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕಿನ ಕಾರಟಗಿ ಮತ್ತು ಇತರೆ 27 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.2189.91ಲಕ್ಷಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು KTPP ನಿಯಮಾವಳಿಯನ್ವಯ ಟೆಂಡರ್ ಆಹ್ವಾನಿಸಲಾಗಿ ಕನಿಷ್ಠ ದರ ನಮೂದಿಸಿದ ಗುತ್ತಿಗೆದಾರರ ದರಗಳನ್ನು ಪರಿಗಣಿಸಿ, ಟೆಂಡರ್‌ನ್ನು ಪರಿಶೀಲಿಸಲಾಗಿ, ಸದರಿ ಕಾಮಗಾರಿಗಳ ಟೆಂಡರ್‌ನ್ನು ಅಂದಿನ CSR ದರಗಳಿಗೆ ಹೋಲಿಸಿದಾಗ, ಕಾಮಗಾರಿಯ ವ್ಯಾಪ್ತಿಯಲ್ಲಿ ಆದ ಬದಲಾವಣೆಗಳಿಂದ ಮತ್ತು Impounding Reservoir ನಿರ್ಮಿಸಲು ಬೇಕಾಗಿರುವ ಭೂಮಿಯು ಲಭ್ಯವಿಲ್ಲದ ಕಾರಣ ಯೋಜನೆಯ ಕಾಮಗಾರಿ ಪ್ರಗತಿಯಲ್ಲಿದ್ದು, ಹೆಚ್ಚುವರಿ ಅಂಶಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ.

ಸದರಿ ಯೋಜನೆಯಲ್ಲಿ ಪರಿಗಣಿಸಿರುವ ಐಆರ್ ನಿರ್ಮಿಸಲು ಸ್ಥಳ ಗುರುತಿಸಲಾಗಿದ್ದು, Impounding Reservoir ನಿರ್ಮಿಸಲು ಬೇಕಾಗಿರುವ ಸ್ಥಳ ಲಭ್ಯವಿಲ್ಲದ ಕಾರಣ ನವಲಿ ಮತ್ತು ಇತರೆ 22 ಗ್ರಾಮಗಳ ಬಹುಗ್ರಾಮ ಕುಡಿಯುವ ಯೋಜನೆಯಲ್ಲಿ ಕಾರಟಗಿ ಯೋಜನೆಯನ್ನು ಸಂಯೋಜಿಸಲಾಗಿರುತ್ತದೆ. Impounding Reservoir ಸ್ಥಳ ಬದಲಾವಣೆಯಿಂದ, ಪೈಪ್‌ಲೈನ್‌ಗಳ ಪ್ರಮಾಣಗಳು ಹೆಚ್ಚಾಗಿರುವುದು, ಐಆರ್ ನ ವಿನ್ಯಾಸವನ್ನು ಸಹ ಪರಿಷ್ಕರಿಸಲಾಗಿದೆ. ಈ ಎಲ್ಲಾ ಅಂಶಗಳನ್ನು ಒಳಗೊಂಡಂತೆ ದರಗಳಿಗೆ ಹೋಲಿಸಿದಾಗ ಯೋಜನೆಯ ಮೊತ್ತವು **ರೂ.33.85ಕೋಟಿಗಳಿಗೆ** ಪರಿಷ್ಕೃತವಾಗಿರುತ್ತದೆ.

ಮೇಲೆ(2)ರಲ್ಲಿ ಓದಲಾದ Variation & EOT ಸಭೆಯಲ್ಲಿ ಮಂಡಿಸಲಾಗಿ, ಸದರಿ ಯೋಜನೆಗಳ ವಿವರಗಳನ್ನು ಪರಿಶೀಲಿಸಿ ಸಭೆಯ ಅನುಮತಿಯಂತೆ **ರೂ.33.85ಕೋಟಿಗಳ** ಪರಿಷ್ಕೃತ ಅಂದಾಜು ಮೊತ್ತಕ್ಕೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮೇಲೆ(3)ರಲ್ಲಿ ಓದಲಾದ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರುರವರ ಕಡತದಲ್ಲಿ ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ **ಕೊಪ್ಪಳ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ 4215–ರಾಜ್ಯವಲಯದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/473/ಗ್ರಾನೀಸ(4)2022 ಬೆಂಗಳೂರು, ದಿನಾಂಕ:21.09.2022.** 1568

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕಿನ ಕಾರಟಗಿ ಮತ್ತು ಇತರೆ 27 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತ **ರೂ.33.85ಕೋಟಿ (ಮೂವತ್ಮೂರು ಕೋಟಿ ಎಂಬತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ** 4215–ರಾಜ್ಯವಲಯದಡಿ ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪರಿಷ್ಕೃತ ಅಂದಾಜು ಮೊತ್ತದಲ್ಲಿ ಯಾವುದೇ ರೀತಿಯ ಹೆಚ್ಚಳಕ್ಕೆ ಆಸ್ಪದ ನೀಡಬಾರದು.

3. ಈ ಆದೇಶದಲ್ಲಿ ಅನುಮೋದನೆಯಾಗಿರುವ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಶಿಫಾರಸ್ಸು ಆಧರಿಸಿ ಅನುದಾನ ಬಿಡುಗಡೆಯಾಗತಕ್ಕದ್ದು ಹಾಗೂ ಸದರಿ ವೆಚ್ಚವನ್ನು 2022–23ರ ಸಾಲಿನ IMISನಲ್ಲಿ ಅಳವಡಿಸಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/9/22
ನಿರ್ದೇಶಕರು
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಕೊಪ್ಪಳ**.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ. &. ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಕೊಪ್ಪಳ**.

9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ. ವೃತ್ತ ಕಛೇರಿ, **ಬಳ್ಳಾರಿ.**
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. &. ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಕೊಪ್ಪಳ.**
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. &. ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು). ಬಹುಮಹಡಿ ಕಟ್ಟಡ, ಬೆಂಗಳೂರು.
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
16. ಗ್ರಾ.ಅ. &. ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.